# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿ ವಿವಿಧ ಕಾರ್ಮಿಕ ಕಾಯ್ದೆಗಳಡಿ ನೋಂದಣಿಯಾಗಿರುವ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ ಅವರ ಋತುಚಕ್ರದ ಸಮಯದಲ್ಲಿ ಮಾಸಿಕ ಒಂದು ದಿನದ ವೇತನ ಸಹಿತ ರಜೆ ಸೌಲಭ್ಯವನ್ನು ಒದಗಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ. ಕಾಇ 466 ಎಲ್‌ಇಟಿ 2023, ದಿನಾಂಕ:12/1/2024.
2. ಆಯುಕ್ತರು, ಕಾರ್ಮಿಕ ಇಲಾಖೆ ಇವರ ಪತ್ರ ಸಂಖ್ಯೆ: ಪಿ&ಎಸ್/ಇತರೆ-02/ಸಿಆರ್-39/2022-23, ದಿನಾಂಕ:21/02/2025.
3. ಸಚಿವ ಸಂಪುಟದ ಟಿಪ್ಪಣಿ ಸಂಖ್ಯೆ:834/2025, ದಿನಾಂಕ: 9/10/2025.

*****

ಮೇಲೆ ಕ್ರ.ಸಂ. (1) ರಲ್ಲಿ ಓದಲಾದ ಅಧಿಸೂಚನೆಯನ್ವಯ ರಾಜ್ಯದಲ್ಲಿ ಕಾರ್ಖಾನೆಗಳ ಕಾಯ್ದೆ, 1948, ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ, 1961, ತೋಟ ಕಾರ್ಮಿಕರ ಕಾಯ್ದೆ, 1951, ಬೀಡಿ ಮತ್ತು ಸಿಗಾರ್ ಕಾರ್ಮಿಕರ (ಉದ್ಯೋಗ ಮತ್ತು ಷರತ್ತುಗಳು) ಕಾಯ್ದೆ, 1966 ಹಾಗೂ ಮೋಟಾರು ಸಾರಿಗೆ ಕಾರ್ಮಿಕರ ಕಾಯ್ದೆ, 1961 ರಡಿ ನೋಂದಣಿಯಾಗಿರುವ ಎಲ್ಲಾ ಕೈಗಾರಿಕೆಗಳು ಹಾಗೂ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರ ಕಾರ್ಯದಕ್ಷತೆ ಮತ್ತು ಕಾರ್ಯಕ್ಷಮತೆ ಹೆಚ್ಚಿಸಿ ಅವರ ಮನೋಸ್ಥೈರ್ಯವನ್ನು ಹೆಚ್ಚಿಸಲು ಮಾಸಿಕ ಋತುಚಕ್ರದ ಸಂದರ್ಭದಲ್ಲಿ ವೇತನ ಸಹಿತ ರಜೆಯನ್ನು ಮಂಜೂರು ಮಾಡಲು ಅಧಿಸೂಚನೆ ಹೊರಡಿಸುವ ಸಂಬಂಧ ಚರ್ಚಿಸಿ ವರದಿ ಸಲ್ಲಿಸಲು ಇಲಾಖೆಯ ವಿವಿಧ ಸ್ತರದ ಅಧಿಕಾರಿಗಳು, ತಜ್ಞವೈದ್ಯರು, ಕಾರ್ಮಿಕ ವರ್ಗಗಳ ಪ್ರತಿನಿಧಿಗಳು, ಕೈಗಾರಿಕಾ ಸಂಘದ ಪ್ರತಿನಿಧಿಗಳು, IT/ BT ಪ್ರತಿನಿಧಿ, ಗಾರ್ಮೆಂಟ್ಸ್ ಮಾಲೀಕರ ಪ್ರತಿನಿಧಿ, ಪ್ರಾಧ್ಯಾಪಕರು, ಸಮಾಜ ಸೇವಕರು, ಮಾಲೀಕ ವರ್ಗದ ಪ್ರತಿನಿಧಿಗಳು, ಇತರೆ ಸದಸ್ಯರುಗಳನ್ನೊಳಗೊಂಡ ತಜ್ಞರ ಸಮಿತಿಯನ್ನು ರಚಿಸಲಾಗಿತ್ತು.

ಸದರಿ ತಜ್ಞರ ಸಮಿತಿಯು ವಿವಿಧ ಹಂತಗಳಲ್ಲಿ ಚರ್ಚಿಸಿ ಕಾರ್ಖಾನೆಗಳು, ಪ್ಲಾಂಟೇಷನ್, ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಮೊದಲಾದವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳೆಯರಿಗೆ ಅವರ ಋತುಚಕ್ರದ ಸಮಯದಲ್ಲಿ ವಾರ್ಷಿಕ 6 ಋತುಸ್ರಾವ ರಜೆಗಳನ್ನು ಬಳಸಿಕೊಳ್ಳಲು "ಋತುಚಕ್ರ ರಜಾನೀತಿ" ಯನ್ನು ಜಾರಿಗೊಳಿಸುವಂತೆ ಶಿಫಾರಸ್ಸು ಮಾಡಿದ್ದು, ಮಹಿಳಾ ನೌಕರರಿಗೆ ವೇತನ ಸಹಿತ ಋತುಸ್ರಾವದ ರಜೆ ನೀಡುವ ಕುರಿತು ಸಾರ್ವಜನಿಕ ಅಭಿಪ್ರಾಯ ಸಂಗ್ರಹಿಸಲು ಅನುಕೂಲವಾಗುವಂತೆ ಕಾರ್ಖಾನೆಗಳು, ಕೈಗಾರಿಕೆಗಳು ಮತ್ತು ಇತರೆ ಉದ್ದಿಮೆಗಳ ಮಾಲೀಕರು, ವಿವಿಧ ಸಂಘಟನೆಗಳು, ಮಹಿಳಾ ಸಂಘಟನೆಗಳು, ಕಾರ್ಮಿಕ ಪ್ರತಿನಿಧಿಗಳು, ಕಾರ್ಮಿಕರು ಹಾಗೂ ಸಾರ್ವಜನಿಕರ ಗಮನಕ್ಕಾಗಿ ಹಾಗೂ ಸಲಹೆ, ಸೂಚನೆ, ಆಕ್ಷೇಪಣೆ/ ಅಭಿಪ್ರಾಯ ಕೋರಿ ಇಲಾಖೆಯ ವೆಬ್‌ಸೈಟ್ karmikaspandana.gov.in ಸೇರಿದಂತೆ ದಿನಾಂಕ: 18-10-2025 ರಂದು ಪ್ರಕಟಿಸಲಾಗಿರುತ್ತದೆ.

ಕಾರ್ಮಿಕರು, ಕಾರ್ಮಿಕ ಸಂಘಗಳು, ಮಾಲೀಕರು, ಮಾಲೀಕ ಸಂಘಗಳು, ಮಹಿಳಾ ಸಂಘಟನೆಗಳು, ಸಾರ್ವಜನಿಕರು, ಸರ್ಕಾರಿ ನೌಕರರ ಒಕ್ಕೂಟ ಮೊದಲಾದವರಿಂದ ಪ್ರಸ್ತಾಪಿತ ಋತುಚಕ್ರ ರಜಾನೀತಿಯ ಸಂಬಂಧ ಒಟ್ಟು 75 ಅಭಿಪ್ರಾಯಗಳು ಸ್ವೀಕೃತವಾಗಿದ್ದು, ಈ ಪೈಕಿ 56 ಅಭಿಪ್ರಾಯಗಳು ಪ್ರಸ್ತಾಪಿತ ಋತುಚಕ್ರ ರಜಾನೀತಿಯ ಪರವಾಗಿರುತ್ತವೆ. ಉಳಿದಂತೆ 19 ಅಭಿಪ್ರಾಯಗಳು ವಿರುದ್ಧವಾಗಿರುತ್ತವೆ. ಉದ್ದೇಶಿತ ರಜಾನೀತಿಯನ್ನು ಬೆಂಬಲಿಸಿ ಸ್ವೀಕೃತವಾದ

...2

56 ಅಭಿಪ್ರಾಯಗಳಲ್ಲಿ, 26 ಅಭಿಪ್ರಾಯಗಳು ಮಾಲೀಕ ವರ್ಗದವರು, 7 ಕಾರ್ಮಿಕ ಸಂಘಗಳು, 19 ನೌಕರರು, 1 ಸಾರ್ವಜನಿಕರು, 1 ಸರ್ಕಾರಿ ನೌಕರರ ಒಕ್ಕೂಟ, 2 ಮಹಿಳಾ ಸಂಘಗಳು ನೀಡಿರುತ್ತಾರೆ. ಅಲ್ಲದೇ ಪ್ರಸ್ತಾಪಿತ ಋತುಚಕ್ರ ರಜಾನೀತಿಯನ್ನು ಬೆಂಬಲಿಸಿರುವ ಕಾರ್ಮಿಕ/ ಕಾರ್ಮಿಕ ಸಂಘಟನೆ/ ಮಹಿಳಾ ಸಂಘಟನೆ/ ಆಡಳಿತ ವರ್ಗದವರ 56 ಅಭಿಪ್ರಾಯಗಳಲ್ಲಿ 10 (10 ಅಭಿಪ್ರಾಯಗಳಲ್ಲಿ 4 ಆಡಳಿತ ವರ್ಗದ ಅಭಿಪ್ರಾಯಗಳು) ಅಭಿಪ್ರಾಯಗಳು ಪ್ರಸ್ತಾಪಿಸಿರುವ ವಾರ್ಷಿಕ 6 ರಜೆಗಳಿಗೆ ಬದಲಾಗಿ 12 ರಜೆಗಳನ್ನು ನೀಡುವಂತೆ ಕೋರಲಾಗಿರುತ್ತವೆ.

ಪ್ರಸ್ತಾಪಿತ ಋತುಚಕ್ರ ರಜಾನೀತಿಯ **ಪರವಾಗಿ** ಹೆಚ್ಚಿನ ಅಭಿಪ್ರಾಯಗಳು ಸ್ವೀಕೃತಗೊಂಡಿರುವುದರಿಂದ ಹಾಗೂ ಸದರಿ ರಜಾನೀತಿಯನ್ನು ರೂಪಿಸುವುದರಿಂದ ವಿವಿಧ ಉದ್ದಿಮೆಗಳಲ್ಲಿ ದುಡಿಯುವ ಮಹಿಳಾ ನೌಕರರ ಆರೋಗ್ಯ ಮತ್ತು ಯೋಗಕ್ಷೇಮ ಉತ್ತೇಜಿಸಲ್ಪಟ್ಟು, ಅವರ ಕಾರ್ಯದಕ್ಷತೆ ಮತ್ತು ಕಾರ್ಯಕ್ಷಮತೆ ಹೆಚ್ಚುತ್ತದೆ. ಇದರಿಂದಾಗಿ ಉತ್ಪಾದನಾ ಚಟುವಟಿಕೆಗಳಲ್ಲಿ ಮಹಿಳಾ ನೌಕರರ ಭಾಗವಹಿಸುವಿಕೆ ಹೆಚ್ಚಿ ದೇಶದ ಉತ್ಪಾದನೆ ಹೆಚ್ಚಲು ಕಾರಣವಾಗುತ್ತದೆ. ಇದರಿಂದ ಮಹಿಳಾ ಸಬಲೀಕರಣ ಸಾಧ್ಯವಾಗುತ್ತದೆ ಹಾಗೂ ಋತುಚಕ್ರದ ರಜಾನೀತಿಯನ್ನು ರೂಪಿಸುವುದರಿಂದ ಮಹಿಳಾ ದುಡಿಮೆಗೆ ಸಂಬಂಧಿಸಿದಂತೆ ಕರ್ನಾಟಕವು ಒಂದು ಜಾಗತಿಕ ಉತ್ತಮ ಅಭ್ಯಾಸವನ್ನು ಹೊಂದಿದಂತಾಗುತ್ತದೆ ಎಂದು ಮೇಲೆ ಕ್ರ.ಸಂ.(2) ರಲ್ಲಿ ಆಯುಕ್ತರು, ಕಾರ್ಮಿಕ ಇಲಾಖೆ, ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(3) ರ ಸಚಿವ ಸಂಪುಟ ಟಿಪ್ಪಣಿಯಲ್ಲಿ "ರಾಜ್ಯದಾದ್ಯಂತ ಸರ್ಕಾರಿ ಕಚೇರಿಗಳು, ಗಾರ್ಮೆಂಟ್ಸ್, MNC ಗಳು, IT ಮತ್ತು ಇತರ ಖಾಸಗಿ ಕೈಗಾರಿಕೆಗಳು ಸೇರಿದಂತೆ ಎಲ್ಲಾ ವಲಯಗಳಲ್ಲಿ ಕೆಲಸ ಮಾಡುವ ಮಹಿಳೆಯರಿಗೆ ಪ್ರತಿ ತಿಂಗಳು ಒಂದು ದಿನದ ವೇತನ ಸಹಿತ ರಜೆ ನೀಡುವ "ಋತುಚಕ್ರ ರಜೆ ನೀತಿ, 2025" ಅನ್ನು ಜಾರಿಗೆ ತರಲು" ಸಚಿವ ಸಂಪುಟವು ಅನುಮೋದಿಸಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ. ಕಾಇ 466 ಎಲ್‌ಇಟಿ 2023,**
**ಬೆಂಗಳೂರು, ದಿನಾಂಕ:12/11/2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಕಾರ್ಖಾನೆಗಳ ಕಾಯ್ದೆ, 1948, ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ, 1961, ತೋಟ ಕಾರ್ಮಿಕರ ಕಾಯ್ದೆ, 1951, ಬೀಡಿ ಮತ್ತು ಸಿಗಾರ್ ಕಾರ್ಮಿಕರ (ಉದ್ಯೋಗ ಮತ್ತು ಷರತ್ತುಗಳು) ಕಾಯ್ದೆ, 1966 ಹಾಗೂ ಮೋಟಾರು ಸಾರಿಗೆ ಕಾರ್ಮಿಕರ ಕಾಯ್ದೆ, 1961ರಡಿ ನೋಂದಣಿಯಾಗಿರುವ ಎಲ್ಲಾ ಕೈಗಾರಿಕೆಗಳು ಹಾಗೂ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 18 ರಿಂದ 52 ವರ್ಷದ ವಯೋಮಿತಿಯ ಎಲ್ಲಾ ಖಾಯಂ/ ಗುತ್ತಿಗೆ/ ಹೊರಗುತ್ತಿಗೆ ಮಹಿಳಾ ನೌಕರರಿಗೆ ಅವರ ಆರೋಗ್ಯ, ಕಾರ್ಯದಕ್ಷತೆ ಮತ್ತು ಕಾರ್ಯಕ್ಷಮತೆ ಹೆಚ್ಚಿಸಿ ಅವರ ಮನೋಸ್ಥೈರ್ಯವನ್ನು ಹೆಚ್ಚಿಸುವ ಸದುದ್ದೇಶದಿಂದ, ಅವರ ಋತುಚಕ್ರದ ಸಮಯದಲ್ಲಿ ಪ್ರತಿ ಮಾಸಿಕ ಒಂದು ದಿನದ ರಜೆಯಂತೆ ವಾರ್ಷಿಕ 12 ದಿನಗಳ ವೇತನ ಸಹಿತ ರಜೆಯ ಸೌಲಭ್ಯವನ್ನು ಸಂಬಂಧಿಸಿದ ಉದ್ಯೋಗದಾತರು ಒದಗಿಸುವಂತೆ ಆದೇಶಿಸಿದೆ.

**ಷರತ್ತುಗಳು:**

1. ಮಹಿಳಾ ನೌಕರರು ಆಯಾ ತಿಂಗಳ "ಋತುಚಕ್ರ ರಜೆ" ಯನ್ನು ಆಯಾ ತಿಂಗಳಿನಲ್ಲಿಯೇ ಬಳಸಿಕೊಳ್ಳುವುದು. ಹಿಂದಿನ ತಿಂಗಳ "ಋತುಚಕ್ರ ರಜೆ" ಯನ್ನು ಮುಂದಿನ ತಿಂಗಳಿಗೆ ವಿಸ್ತರಿಸಲು (carry over) ಅವಕಾಶವಿರುವುದಿಲ್ಲ.

...3

2. ಪ್ರತಿ ತಿಂಗಳು ಒಂದು ದಿನದ "ಋತುಚಕ್ರ ರಜೆ" ಪಡೆಯಲು ಮಹಿಳಾ ನೌಕರರು ಯಾವುದೇ ವೈದ್ಯಕೀಯ ಪ್ರಮಾಣ ಪತ್ರವನ್ನು ಒದಗಿಸುವ ಅವಶ್ಯಕತೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Suma S 12/11/2025

**(ಸುಮ .ಎಸ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

12/11

**ಇವರಿಗೆ:**

1. ಆಯುಕ್ತರು, ಕಾರ್ಮಿಕ ಇಲಾಖೆ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು (ಎಲ್ಲಾ ಉದ್ಯೋಗದಾತರ ಗಮನಕ್ಕೆ ತರುವಂತೆ ಕೋರಿದೆ).
2. ಆಯುಕ್ತರು, ಕಾರ್ಮಿಕ ರಾಜ್ಯ ವಿಮಾ ವೈದ್ಯಕೀಯ ಸೇವೆಗಳು, ರಾಜಾಜಿನಗರ, ಬೆಂಗಳೂರು.
3. ನಿರ್ದೇಶಕರು, ಕಾರ್ಖಾನೆಗಳು, ಬಾಯ್ಲರ್‌ಗಳು ಹಾಗೂ ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಬೆಂಗಳೂರು (ಎಲ್ಲಾ ಉದ್ಯೋಗದಾತರ ಗಮನಕ್ಕೆ ತರುವಂತೆ ಕೋರಿದೆ).

**ಪ್ರತಿ:**

1. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಶಾಖೆ, ಸಿಆಸುಇ (ಸಚಿವ ಸಂಪುಟ ಶಾಖೆ) (ಸಚಿವ ಸಂಪುಟದ ಟಿಪ್ಪಣಿ ಸಂಖ್ಯೆ:834/2025), ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಶಾಖೆ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಹೆಚ್ಚುವರಿ ಪ್ರತಿಗಳು/ ಶಾಖಾ ರಕ್ಷಾ ಕಡತ.